# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 200 |
| ಸದಸ್ಯರ ಹೆಸರು | ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 16.07.2024 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಕಲ್ಲು ಗಣಿಗಾರಿಕೆ ಮತ್ತು ಕ್ರಷರ್ ಮಷಿನ್‌ಗಳನ್ನು ನಡೆಸುವ ಸಲುವಾಗಿ ಸರ್ಕಾರದಿಂದ ಅನುಮತಿ ಪಡೆದು ಕಾರ್ಯ ನಿರ್ವಹಿಸು ತ್ತಿರುವ ಘಟಕಗಳೆಷ್ಟು; ಸದರಿ ಘಟಕಗಳಲ್ಲಿ ಸರ್ಕಾರದ ನಿಯಮಾವಳಿ ಗಳನ್ನು ಪಾಲಿಸ ಲಾಗುತ್ತಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು)</td><td>

• ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಈ ಕೆಳಕಂಡಂತೆ ಕಲ್ಲುಗಣಿ ಗುತ್ತಿಗೆ ಮಂಜೂರಾತಿ ಮತ್ತು ಸ್ಟೋನ್ ಕ್ರಷರ್ ಘಟಕಗಳಿಗೆ ಲೈಸೆನ್ಸ್‌ಗಳನ್ನು ಮಂಜೂರು ಮಾಡಲಾಗಿರುತ್ತದೆ.

<table>
<tr><th>ಕ್ರ. ಸಂ</th><th>ಜಿಲ್ಲೆ</th><th>ಅಲಂಕಾರಿಕ ಶಿಲೆ</th><th>ಕಟ್ಟಡ ಕಲ್ಲು</th><th>ಸ್ಟೋನ್ ಕ್ರಷರ್ ಘಟಕಗಳ ಲೈಸೆನ್ಸ್</th></tr>
<tr><td>1.</td><td>ಕೋಲಾರ</td><td>02</td><td>115</td><td>37</td></tr>
<tr><td>2.</td><td>ಚಿಕ್ಕಬಳ್ಳಾಪುರ</td><td>72</td><td>136</td><td>79</td></tr>
</table>

• ಸದರಿ ಜಿಲ್ಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಾಗೂ ನಿಷ್ಕ್ರಿಯವಾಗಿರುವ ಕಲ್ಲುಗಣಿ ಗುತ್ತಿಗೆ ಮತ್ತು ಸ್ಟೋನ್ ಕ್ರಷರ್ ಘಟಕಗಳ ವಿವರ ಕೆಳಕಂಡಂತಿದೆ:

<table>
<tr><th rowspan="2">ಜಿಲ್ಲೆ</th><th colspan="2">ನಿರ್ದಿಷ್ಟ ಉಪಖನಿಜ ಗುತ್ತಿಗೆಗಳ ಸಂಖ್ಯೆ</th><th colspan="2">ನಿರ್ದಿಷ್ಟವಲ್ಲದ ಉಪಖನಿಜ ಗುತ್ತಿಗೆಗಳ ಸಂಖ್ಯೆ</th><th colspan="2">ಸ್ಟೋನ್ ಕ್ರಷರ್ ಘಟಕಗಳ ಸಂಖ್ಯೆ</th></tr>
<tr><th>ಕಾರ್ಯ ನಿರತ</th><th>ನಿಷ್ಕ್ರಿಯ</th><th>ಕಾರ್ಯ ನಿರತ</th><th>ನಿಷ್ಕ್ರಿಯ</th><th>ಕಾರ್ಯ ನಿರತ</th><th>ನಿಷ್ಕ್ರಿಯ</th></tr>
<tr><td>ಕೋಲಾರ</td><td>01</td><td>01</td><td>69</td><td>46</td><td>35</td><td>02</td></tr>
<tr><td>ಚಿಕ್ಕ ಬಳ್ಳಾಪುರ</td><td>65</td><td>07</td><td>113</td><td>23</td><td>66</td><td>13</td></tr>
</table>

• ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957ರ ಕಲಂ 15 ರಲ್ಲಿ ರಾಜ್ಯ ಸರ್ಕಾರಗಳಿಗೆ ನೀಡಿರುವ ಅಧಿಕಾರದನ್ವಯ, ರಾಜ್ಯದಲ್ಲಿ ಉಪಖನಿಜಗಳ ಗಣಿಗಾರಿಕೆಗೆ ಗುತ್ತಿಗೆ ಮಂಜೂರಾತಿ ನಿಯಂತ್ರಣ ಕುರಿತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994ನ್ನು ಜಾರಿಗೆ ತರಲಾಗಿದ್ದು, ಸದರಿ ನಿಯಮಗಳಂತೆ ಉಪಖನಿಜಗಳ ಗಣಿಗಾರಿಕೆಗೆ ಗುತ್ತಿಗೆಗಳನ್ನು ಪಡೆಯುವುದು ಕಡ್ಡಾಯವಾಗಿರುತ್ತದೆ.

• ಕಲ್ಲುಗಣಿ ಗುತ್ತಿಗೆಗಳನ್ನು ಮಂಜೂರು ಮಾಡಲು ಅನುಮೋದಿತ ಕ್ವಾರಿಯಿಂಗ್ ಪ್ಲಾನ್, ಪರಿಸರ ಅನುಮತಿ ಪತ್ರ ಮತ್ತು ಡ್ರೋಣ್ /-

</td></tr>
</table>

...2

| | | |
|---|---|---|
| | | -ಡಿಜಿಪಿಎಸ್ ಜಂಟಿ ಮೋಜಣಿ ವರದಿ ಸಲ್ಲಿಸಿ, ಅನ್ವಯಿಕ ಶುಲ್ಕಗಳನ್ನು ಪಾವತಿಸಿಕೊಂಡು, ನಂತರ ಕಲ್ಲುಗಣಿ ಗುತ್ತಿಗೆ ಕರಾರು ಅಮಲ್ಜಾರಿ ಮಾಡಲಾಗುತ್ತದೆ<br>• ಗುತ್ತಿಗೆದಾರರು ಕಲ್ಲುಗಣಿ ಗುತ್ತಿಗೆ ಪ್ರದೇಶದಲ್ಲಿ ಗಣಿಗಾರಿಕೆ ಪ್ರಾರಂಭಿಸುವ ಪೂರ್ವದಲ್ಲಿ Director General Mines Safety (DGMS) ರವರಿಂದ Notice of Opening Quarry ಪ್ರಮಾಣ ಪತ್ರವನ್ನು ಪಡೆದು ತಾಂತ್ರಿಕವಾಗಿ ಅರ್ಹ ವ್ಯಕ್ತಿಗಳನ್ನು ನೇಮಿಸಿಕೊಂಡು ಗಣಿಗಾರಿಕೆ ನಿರ್ವಹಿಸಬೇಕಾಗಿರುತ್ತದೆ.<br>• ಕಲ್ಲುಗಣಿ ಗುತ್ತಿಗೆದಾರರು ಕರಾರು ದಸ್ತಾವೇಜುಗಳನ್ನು ಸಂಬಂಧಪಟ್ಟ ಉಪನೋಂದಣಾಧಿಕಾರಿ ಕಛೇರಿಯಲ್ಲಿ ಸಲ್ಲಿಸಿದ ನಂತರ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ILMS ತಂತ್ರಾಂಶದಲ್ಲಿ ಕಲ್ಲುಗಣಿ ಗುತ್ತಿಗೆಯನ್ನು ನೋಂದಾಯಿಸಿ, ಗುತ್ತಿಗೆದಾರರು ಗುತ್ತಿಗೆ ಪ್ರದೇಶದಲ್ಲಿ ಉತ್ಪಾದಿಸಿದ ಉಪಖನಿಜವನ್ನು ಸರ್ಕಾರವು ನಿಗದಿಪಡಿಸಿರುವ ರಾಜಧನ, ಹೆಚ್ಚುವರಿ ಪಾವತಿ, ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿಗೆ ವಂತಿಕೆಯನ್ನು ಪಾವತಿಸಿ, ಖನಿಜ ರವಾನೆ ಪರವಾನಿಗೆಯೊಂದಿಗೆ ಸಾಗಾಣಿಕೆ ಮಾಡುತ್ತಿರುತ್ತಾರೆ.<br>• ಅದರಂತೆ, ಕೋಲಾರ ಜಿಲ್ಲಾ ವ್ಯಾಪ್ತಿಯಲ್ಲಿ ಒಟ್ಟು 115 ಕಟ್ಟಡ ಕಲ್ಲುಗಣಿ ಗುತ್ತಿಗೆಗಳು ಚಾಲ್ತಿಯಲ್ಲಿದ್ದು, ಈ ಪೈಕಿ 19 ಗುತ್ತಿಗೆಗಳು ಮಾನವ ಶ್ರಮದಿಂದ ಗಣಿಗಾರಿಕೆ ನಿರ್ವಹಿಸುವ ಗುತ್ತಿಗೆಗಳಾಗಿರುತ್ತವೆ.<br>• ಸ್ಫೋಟಕ ಬಳಸಿ ಗಣಿಗಾರಿಕೆ ನಿರ್ವಹಿಸುವ 96 ಗುತ್ತಿಗೆಗಳ ಪೈಕಿ 63 ಕಲ್ಲುಗಣಿ ಗುತ್ತಿಗೆದಾರರು Director General Mines Safety (DGMS) ರವರಿಂದ ಅನುಮತಿ ಪಡೆದು ಗಣಿಗಾರಿಕೆ ನಿರ್ವಹಿಸುತ್ತಿರುತ್ತಾರೆ.<br>• 33 ಗುತ್ತಿಗೆಗಳು ಗಣಿಗಾರಿಕೆ ನಿರ್ವಹಿಸದೆ ಸ್ಥಗಿತಗೊಂಡಿದ್ದು, ಸದರಿ ಕಲ್ಲುಗಣಿ ಗುತ್ತಿಗೆದಾರರುಗಳು Director General Mines Safety (DGMS) ರವರಿಂದ ಅನುಮತಿ ಪಡೆದು ಸಲ್ಲಿಸಿರುವುದಿಲ್ಲ.<br>• ಚಿಕ್ಕಬಳ್ಳಾಪುರ ಜಿಲ್ಲಾ ವ್ಯಾಪ್ತಿಯಲ್ಲಿ ಒಟ್ಟು 136 ಕಟ್ಟಡ ಕಲ್ಲುಗಣಿ ಗುತ್ತಿಗೆಗಳು ಚಾಲ್ತಿಯಲ್ಲಿದ್ದು, ಈ ಪೈಕಿ 106 ಕಲ್ಲುಗಣಿ ಗುತ್ತಿಗೆದಾರರು Director General Mines Safety (DGMS) ರವರಿಂದ ಅನುಮತಿ ಪಡೆದು ಗಣಿಗಾರಿಕೆ ನಿರ್ವಹಿಸುತ್ತಿರುತ್ತಾರೆ. 24 ಗುತ್ತಿಗೆಗಳು ಗಣಿಗಾರಿಕೆ ನಿರ್ವಹಿಸದೆ ಸ್ಥಗಿತಗೊಂಡಿದ್ದು, ಸದರಿ ಕಲ್ಲುಗಣಿ ಗುತ್ತಿಗೆದಾರರು ಗಳು Director General Mines Safety (DGMS) ರವರಿಂದ ಅನುಮತಿ ಪಡೆದು ಸಲ್ಲಿಸಿರುವುದಿಲ್ಲ. ಹೊಸದಾಗಿ 06 ಗುತ್ತಿಗೆಗಳನ್ನು ಮಂಜೂರು ಮಾಡಿದ್ದು, ಸದರಿ ಗುತ್ತಿಗೆದಾರರು ಅನುಮತಿ ಪಡೆಯಲು ಕ್ರಮ ವಹಿಸುತ್ತಿರುತ್ತಾರೆ.<br>• ಕೋಲಾರ ಜಿಲ್ಲೆಯಲ್ಲಿ ಕಲ್ಲುಪುಡಿ ಮಾಡುವ ಘಟಕಗಳ ಸಂಬಂಧ, ಸದರಿ ಘಟಕಗಳ ಮಾಲೀಕರುಗಳು ಕರ್ನಾಟಕ ಕಲ್ಲುಪುಡಿ ಮಾಡುವ ಘಟಕಗಳ ನಿಯಂತ್ರಣ ಅಧಿನಿಯಮ, 2011ರ ಕಲಂ 6-A ರಲ್ಲಿನ ಷರತ್ತು ಮತ್ತು ನಿಬಂಧನೆಗಳನ್ನು ಪಾಲಿಸಬೇಕಾಗಿರುತ್ತದೆ. |

. . . 3

- 04 ಸ್ಟೋನ್ ಕ್ರಷರ್ ಘಟಕದ ಮಾಲೀಕರು ಸದರಿ ನಿಯಮಗಳ ಉಲ್ಲಂಘನೆ ಮಾಡಿರುವುದು ಕಂಡುಬಂದಿದ್ದು, ಈ ಸಂಬಂಧ ₹ 20.00 ಲಕ್ಷಗಳ ದಂಡವನ್ನು ವಿಧಿಸಿ, ಸಂಗ್ರಹಿಸಲಾಗಿದೆ.
- ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಕಲ್ಲುಪುಡಿ ಮಾಡುವ ಘಟಕಗಳ ಸಂಬಂಧ, ಸದರಿ ಘಟಕಗಳ ಮಾಲೀಕರುಗಳು ಕರ್ನಾಟಕ ಕಲ್ಲುಪುಡಿ ಮಾಡುವ ಘಟಕಗಳ ನಿಯಂತ್ರಣ ಅಧಿನಿಯಮ, 2011ರ ಕಲಂ 6-A ರಲ್ಲಿನ ಷರತ್ತು ಮತ್ತು ನಿಬಂಧನೆಗಳನ್ನು ಪಾಲಿಸಬೇಕಾಗಿದ್ದು, ಸದರಿ ನಿಯಮಗಳ ಉಲ್ಲಂಘನೆ ಪ್ರಕರಣಗಳು ಕಂಡು ಬಂದಿರುವುದಿಲ್ಲ.
- ಕರ್ನಾಟಕ ಕಲ್ಲುಪುಡಿ ಮಾಡುವ ಘಟಕಗಳ ನಿಯಂತ್ರಣ ನಿಯಮಗಳು, 2012ರ ನಿಯಮ 3-B ರಂತೆ ಸ್ಟೋನ್ ಕ್ರಷರ್ ಘಟಕಗಳನ್ನು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ILMS ತಂತ್ರಾಂಶದಲ್ಲಿ ನೋಂದಾಯಿಸಿಕೊಂಡು, ಸದರಿ ಘಟಕದಲ್ಲಿ ಸಂಸ್ಕರಿಸುವ ಕಚ್ಚಾ ಕಟ್ಟಡ ಕಲ್ಲನ್ನು ಅಧಿಕೃತ ಕಲ್ಲುಗಣಿ ಗುತ್ತಿಗೆದಾರರಿಂದ ಖನಿಜ ರವಾನೆ ಪರವಾನಗಿ ಪಡೆದು ಸಂಸ್ಕರಿಸಿದ ಅಂತಿಮ ಉತ್ಪನ್ನಗಳನ್ನು ನಿಯಮ 3-C ರಂತೆ ಸೆಕೆಂಡರಿ ಪರವಾನಗಿ ಪಡೆದು ಸಾಗಾಣಿಕೆ ಮಾಡಬೇಕಾಗಿದ್ದು, ಅದರಂತೆ ಕ್ರಮ ವಹಿಸಲಾಗುತ್ತಿದೆ.

**ಆ)** ಸರ್ಕಾರದ ಅನುಮತಿ ಪಡೆಯದೆ ಅನಧಿಕೃವಾಗಿ ಕೆಲವೊಂದು ಘಟಕಗಳು ಕಲ್ಲು ಗಣಿಗಾರಿಕೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಎಷ್ಟು ಘಟಕಗಳು ಅನಧಿಕೃತವಾಗಿ ಕಾರ್ಯ ನಿರ್ವಹಿಸುತ್ತಿವೆ; ಸದರಿ ಘಟಕಗಳಲ್ಲಿ ಸಾವು-ನೋವಿನ ಅವಗಡಗಳು ಸಂಭವಿಸಿವೆಯೇ; -

- ಕೋಲಾರ ಜಿಲ್ಲಾ ವ್ಯಾಪ್ತಿಯಲ್ಲಿ ಕಳೆದ 03 ವರ್ಷಗಳಲ್ಲಿ 85 ಅನಧಿಕೃತ ಕಲ್ಲು ಗಣಿಗಾರಿಕೆ ನಡೆಸುತ್ತಿರುವ ಪ್ರಕರಣಗಳನ್ನು ಪತ್ತೆ ಹಚ್ಚಿದ್ದು, ಸದರಿಯವರ ವಿರುದ್ಧ ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957 ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994ರ ನಿಯಮಗಳಂತೆ ಮೊಕದ್ದಮೆ ಗಳನ್ನು ದಾಖಲಿಸಿ, ದಂಡ ಸಂಗ್ರಹಿಸಲು ಕ್ರಮ ಕೈಗೊಳ್ಳಲಾಗಿದೆ.

| ಕ್ರ. ಸಂ. | ವರ್ಷ | ಪತ್ತೆ ಹಚ್ಚಿದ ಪ್ರಕರಣಗಳ ಸಂಖ್ಯೆ | ವಿಧಿಸಿದ ದಂಡ (₹ ಲಕ್ಷಗಳಲ್ಲಿ) | ದಾಖಲಿಸಿರುವ ಮೊಕದ್ದಮೆಗಳು |
|---|---|---|---|---|
| 1. | 2022-23 | 46 | 25.18 | 0 |
| 2. | 2023-24 | 28 | 25.04 | 2 |
| 3. | 2024-25 | 11 | 4.25 | 0 |
| | ಒಟ್ಟು | 85 | 54.47 | 2 |

- ಚಿಕ್ಕಬಳ್ಳಾಪುರ ಜಿಲ್ಲೆಯ ವ್ಯಾಪ್ತಿಯಲ್ಲಿ ಕಳೆದ 03 ವರ್ಷಗಳಲ್ಲಿ 33 ಅನಧಿಕೃತ ಕಲ್ಲುಗಣಿಗಾರಿಕೆ ನಡೆಸುತ್ತಿರುವ ಪ್ರಕರಣಗಳನ್ನು ಪತ್ತೆ ಹಚ್ಚಿದ್ದು, ಸದರಿಯವರ ವಿರುದ್ಧ ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957 ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994ರಂತೆ ಮೊಕದ್ದಮೆಗಳನ್ನು ದಾಖಲಿಸಿ, ದಂಡ ಸಂಗ್ರಹಿಸಲು ಕ್ರಮ ಕೈಗೊಳ್ಳಲಾಗಿದೆ.

. . . 4

ಹಾಗಿದ್ದಲ್ಲಿ, ಅಂತಹವರುಗಳ ವಿರುದ್ಧ ಸರ್ಕಾರ ತೆಗೆದು ಕೊಂಡಿರುವ ಕ್ರಮಗಳೇನು;

| ಕ್ರ. ಸಂ. | ವರ್ಷ | ಪತ್ತೆ ಹಚ್ಚಿದ ಪ್ರಕರಣಗಳ ಸಂಖ್ಯೆ | ವಿಧಿಸಿದ ದಂಡ (₹ಲಕ್ಷಗಳಲ್ಲಿ) | ದಾಖಲಿಸಿರುವ ಮೊಕದ್ದಮೆಗಳು |
|---|---|---|---|---|
| 1. | 2022-23 | 23 | 14.97 | 2 |
| 2. | 2023-24 | 09 | 11.64 | 2 |
| 3. | 2024-25 | 01 | 0.00 | 1 |
| | ಒಟ್ಟು | 33 | 26.61 | 5 |

- ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ವ್ಯಾಪ್ತಿಯಲ್ಲಿ ಪ್ರಸ್ತುತ ಕ್ರಷರ್ ಪರವಾನಗಿ ಪಡೆಯದೇ ಅನಧಿಕೃತವಾಗಿ ಕ್ರಷರ್ ಚಾಲನೆಗೊಳಿಸಿರುವ ಪ್ರಕರಣಗಳು ಕಂಡುಬಂದಿರುವುದಿಲ್ಲ.
- ಕೋಲಾರ ಜಿಲ್ಲೆಯಲ್ಲಿ, ಕಲ್ಲು ಗಣಿಗಾರಿಕೆಯ 1058 ರ ಕಲ್ಲುಗಣಿ ಗುತ್ತಿಗೆ ಪ್ರದೇಶದಲ್ಲಿ ಮಾಲೂರು ತಾಲ್ಲೂಕಿನ ಹಳೇಪಾಳ್ಯ ಗ್ರಾಮದ ಶ್ರೀ ಸಿ.ಮಂಜುನಾಥ ರವರ ಗುತ್ತಿಗೆ ಪ್ರದೇಶಕ್ಕೆ ರಸ್ತೆ ಸಂಪರ್ಕ ಕಲ್ಪಿಸಲು ಯಂತ್ರೋಪಕರಣಗಳು ಹಾಗೂ ಸ್ಥಳೀಯ ಸ್ಫೋಟಕ ಬಳಕೆಯಿಂದ ಭೂಕುಸಿತವಾಗಿ ಹಿಟಾಚಿ ಚಾಲಕ ಶ್ರೀ ಪ್ರವೀಣ್ ಕುಮಾರ್ ಬಿನ್ ಗಂಗಪ್ಪ ಎಂಬುವರು ಕಲ್ಲುಬಂಡೆ ಮಧ್ಯೆ ಸಿಕ್ಕಿಕೊಂಡು ಮೃತಪಟ್ಟಿರುತ್ತಾರೆ. ಈ ಸಂಬಂಧ ಗುತ್ತಿಗೆದಾರರ ವಿರುದ್ಧ ದಿನಾಂಕ 18.06.2024ರಂದು ಎಫ್.ಐ.ಆರ್. ಸಂಖ್ಯೆ 122/2024 ದಾಖಲಾಗಿರುತ್ತದೆ. ಸದರಿ ಕಲ್ಲುಗಣಿ ಗುತ್ತಿಗೆ ಪ್ರದೇಶದಲ್ಲಿ ಯಾವುದೇ ರೀತಿಯ ಗಣಿಗಾರಿಕೆ / ಸಾಗಾಣಿಕೆ ಚಟುವಟಿಕೆಗಳನ್ನು ನಡೆಸದಂತೆ ನಿಲಂಬನೆಗೊಳಿಸಿ (Suspended) ಆದೇಶ ಜಾರಿ ಮಾಡಲಾಗಿರುತ್ತದೆ ಹಾಗೂ ಮೃತ ವ್ಯಕ್ತಿಯ ಕುಟುಂಬಕ್ಕೆ ಪರಿಹಾರ ಧನ ನೀಡುವ ಕಾರ್ಯ ಪ್ರಗತಿಯಲ್ಲಿದೆ.
- ಮೆ|| ಶಿರಡಿ ಸಾಯಿ ಅಗ್ರಿಗೇಟ್ಸ್ ಎಂಬ ಪಾಲುದಾರಿಕೆ ಸಂಸ್ಥೆಯು ಚಿಕ್ಕಬಳ್ಳಾಪುರ ಜಿಲ್ಲೆ ಮತ್ತು ತಾಲ್ಲೂಕು ಜನ್ನಾಲಕುಂಟೆ ಗ್ರಾಮದ ಸರ್ವೆ ನಂ. 11ರ 03-20 ಎಕರೆ ಪ್ರದೇಶದಲ್ಲಿ ದಿನಾಂಕ 21.07.2010 ರಿಂದ 20 ವರ್ಷಗಳ ಅವಧಿಗೆ ಕಟ್ಟಡ ಕಲ್ಲುಗಣಿ ಗುತ್ತಿಗೆ ಸಂಖ್ಯೆ 100 ನ್ನು ಹೊಂದಿದ್ದು, ಸದರಿ ಕಲ್ಲುಗಣಿ ಗುತ್ತಿಗೆಯಿಂದ ಸ್ಫೋಟಕಗಳನ್ನು ಹೊರಗಡೆ ಸಾಗಾಣಿಕೆ ಮಾಡುವ ಸಂದರ್ಭದಲ್ಲಿ ಸ್ಫೋಟಗೊಂಡು ದಿನಾಂಕ 23.02.2021 ರಂದು ಚಿಕ್ಕಬಳ್ಳಾಪುರ ಜಿಲ್ಲೆ, ಗುಡಿಬಂಡೆ ತಾಲ್ಲೂಕು, ಹಿರೇನಾಗವಲ್ಲಿ (ವರ್ಲಕೊಂಡ) ಗ್ರಾಮದಲ್ಲಿ ಆರು ಜನ ಮೃತಪಟ್ಟಿರುತ್ತಾರೆ.
- ಸದರಿ ಸ್ಫೋಟದ ಸಂಬಂಧ ಕಲ್ಲುಗಣಿ ಗುತ್ತಿಗೆ ಹಾಗೂ ಕ್ರಷರ್ ಮಾಲೀಕರಾದ ಮೆ|| ಶಿರಡಿ ಸಾಯಿ ಅಗ್ರಿಗೇಟ್ಸ್ ಸಂಸ್ಥೆ ವಿರುದ್ಧ ಗುಡಿಬಂಡೆ ಪೊಲೀಸ್ ಠಾಣೆಯಲ್ಲಿ ಮೊಕದ್ದಮೆ ಸಂ. 34/2021 ಕಲಂ 286, 304 ಐ.ಪಿ.ಸಿ. ಮತ್ತು ಕಲಂ(ಬಿ) Explosive Act, 1884 ಮತ್ತು Explosive Substance Act, 1908 ರ ಕಲಂ 5 ರಡಿ ದಿನಾಂಕ 23.02.2021ರಂದು ಪ್ರಕರಣ ದಾಖಲಿಸಲಾಗಿರುತ್ತದೆ.
- ಕಲ್ಲುಗಣಿ ಗುತ್ತಿಗೆ ಸಂಖ್ಯೆ 100ರ ಪ್ರದೇಶದಲ್ಲಿ ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಪ್ರಕಾರ ಗಣಿಗಾರಿಕೆ ನಡೆಸದ ಕಾರಣ ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994ರ ನಿಯಮ 8-K ರಂತೆ -

<table>
<tr>
<td></td>
<td></td>
<td>-ಗಣಿಗಾರಿಕೆಯನ್ನು ದಿನಾಂಕ 03.03.2021 ರಂದು ನಿಲಂಬನೆಗೊಳಿಸಿ ಆದೇಶಿಸಿದೆ.<br>
• ಸ್ಫೋಟಕದಿಂದ 06 ಜನ ಕಾರ್ಮಿಕರು ಮೃತಪಟ್ಟಿರುವ ಪ್ರಕರಣದ ವಿರುದ್ಧ ಮಾನ್ಯ ರಾಷ್ಟ್ರೀಯ ಹಸಿರು ಪೀಠ, ಪ್ರಧಾನ ಪೀಠ, ನವದೆಹಲಿ ಇಲ್ಲಿ ಸ್ವಯಂ ಪ್ರೇರಿತವಾಗಿ ಮೂಲ ಅರ್ಜಿ ಸಂಖ್ಯೆ 59/2021 ರಂತೆ ದೂರು ದಾಖಲಾಗಿರುತ್ತದೆ. ಈ ಪ್ರಕರಣದಲ್ಲಿ ನೀಡಲಾಗಿರುವ ದಿನಾಂಕ 22.04.2022ರ ಆದೇಶದಲ್ಲಿ, ಸದರಿ ಸ್ಫೋಟಕದಲ್ಲಿ ಮೃತರಾದ 06 ಜನರ ಕುಟುಂಬದವರನ್ನು ಗುರುತಿಸಿ ₹1,25,47,500/- ಗಳ ಪರಿಹಾರ ನೀಡಲು ನಿರ್ದೇಶನ ನೀಡಿರುತ್ತದೆ.<br>
• ಮಾನ್ಯ ರಾಷ್ಟ್ರೀಯ ಹಸಿರು ಪೀಠದ ನಿರ್ದೇಶನದಂತೆ, ಕಲ್ಲುಗಣಿ ಗುತ್ತಿಗೆದಾರರು ಮೃತರ ಕುಟುಂಬಗಳ ಅಧಿಕೃತ ವಾರಸುದಾರರುಗಳಿಗೆ ₹1,25,47,500/- ಗಳ ಪೂರ್ಣ ಪರಿಹಾರದ ಮೊತ್ತವನ್ನು ಸಂದಾಯ ಮಾಡಿರುತ್ತಾರೆ.</td>
</tr>
<tr>
<td>ಇ)</td>
<td>ಸದರಿ ಕಲ್ಲು ಗಣಿಗಾರಿಕೆಯಿಂದ ಮತ್ತು ಕ್ರಷರ್ ಮಷಿನ್ ನಿಂದ ಸರ್ಕಾರದ ಬೊಕ್ಕಸಕ್ಕೆ ಬರುವ ವಾರ್ಷಿಕ ಆದಾಯ ವೆಷ್ಟು; ಅನಧಿಕೃತ ಗಣಿಗಾರಿಕೆಯಿಂದ ಸರ್ಕಾರದ ಬೊಕ್ಕಸಕ್ಕೆ ಆಗುವ ವಾರ್ಷಿಕ ನಷ್ಟದ ಪ್ರಮಾಣವೆಷ್ಟು; ಅಕ್ರಮ ಗಣಿಗಾರಿಕೆಯಲ್ಲಿ ತೊಡಗಿರುವ ವ್ಯಕ್ತಿಗಳನ್ನು ಪತ್ತೆ ಹಚ್ಚಲು ಹಾಗೂ ಶಿಸ್ತು ಪಾಲಿಸಲು ಸರ್ಕಾರದ ನಿಯಮಾವಳಿಗಳು ಮತ್ತು ಶಿಕ್ಷೆಗಳು ಏನು;</td>
<td>• ಕೋಲಾರ ಜಿಲ್ಲಾ ವ್ಯಾಪ್ತಿಯಲ್ಲಿ ಕಳೆದ 03 ವರ್ಷಗಳಲ್ಲಿ ಕಲ್ಲು ಗಣಿಗಾರಿಕೆಯಿಂದ ಸಂಗ್ರಹವಾದ ರಾಜಧನದ ವಿವರ ಕೆಳಕಂಡಂತಿದೆ:
<table>
<tr><th>ಕ್ರ. ಸಂ.</th><th>ವರ್ಷ</th><th>ಸಂಗ್ರಹಿಸಿದ ರಾಜಧನ (₹ ಕೋಟಿಗಳಲ್ಲಿ)</th></tr>
<tr><td>1.</td><td>2022-23</td><td>52.70</td></tr>
<tr><td>2.</td><td>2023-24</td><td>63.66</td></tr>
<tr><td>3.</td><td>2024-25 (ಜೂನ್ ಅಂತ್ಯಕ್ಕೆ)</td><td>07.51</td></tr>
<tr><td colspan="2">ಒಟ್ಟು</td><td>123.87</td></tr>
</table>
• ಚಿಕ್ಕಬಳ್ಳಾಪುರ ಜಿಲ್ಲಾ ವ್ಯಾಪ್ತಿಯಲ್ಲಿ ಕಳೆದ 03 ವರ್ಷಗಳಲ್ಲಿ ಕಲ್ಲು ಗಣಿಗಾರಿಕೆಯಿಂದ ಸಂಗ್ರಹವಾದ ರಾಜಧನದ ವಿವರ ಕೆಳಕಂಡಂತಿದೆ:
<table>
<tr><th>ಕ್ರ. ಸಂ.</th><th>ವರ್ಷ</th><th>ಸಂಗ್ರಹಿಸಿದ ರಾಜಧನ (₹ ಕೋಟಿಗಳಲ್ಲಿ)</th></tr>
<tr><td>1.</td><td>2022-23</td><td>69.73</td></tr>
<tr><td>2.</td><td>2023-24</td><td>101.11</td></tr>
<tr><td>3.</td><td>2024-25 (ಜೂನ್ ಅಂತ್ಯಕ್ಕೆ)</td><td>23.71</td></tr>
<tr><td colspan="2">ಒಟ್ಟು</td><td>194.55</td></tr>
</table>
• ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994 ರಂತೆ, ಕ್ರಷರ್ ಘಟಕದ ಮಾಲೀಕರು ರಾಜಧನ ಪಾವತಿಸಬೇಕಾಗಿರುವುದಿಲ್ಲ. ಕ್ರಷರ್ ಘಟಕದಲ್ಲಿ ಬಳಕೆ ಮಾಡುವ ಕಚ್ಚಾ ಕಟ್ಟಡ ಕಲ್ಲಿಗೆ ಕಲ್ಲುಗಣಿ ಗುತ್ತಿಗೆದಾರರಿಂದ ರಾಜಧನ ಪಾವತಿಯಾಗುತ್ತದೆ.<br>
• ಕಲ್ಲುಗಣಿ ಗುತ್ತಿಗೆದಾರರಿಂದ ರಾಜಧನ ಪಾವತಿಯಾಗಿರುವ ಉಪ ಖನಿಜವನ್ನು ಕ್ರಷರ್ ಘಟಕದ ಮಾಲೀಕರುಗಳು ಖರೀದಿಸಿ, ಸ್ಟೋನ್ ಕ್ರಷರ್ ಘಟಕದಲ್ಲಿ ಸಂಸ್ಕರಿಸಿದ ಕಟ್ಟಡ ಕಲ್ಲಿನ ಉತ್ಪನ್ನಗಳನ್ನು ಸೆಕೆಂಡರಿ ಖನಿಜ ರವಾನೆ ಪರವಾನಿಗೆ ಪಡೆದು ಸಾಗಾಣಿಕೆ ಮಾಡಬೇಕಾಗಿರುತ್ತದೆ.</td>
</tr>
</table>

. . . 6

- ಖನಿಜಗಳ ಅನಧಿಕೃತ ಗಣಿಗಾರಿಕೆಯು ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957 ರ ಕಲಂ 4(1) ಹಾಗೂ ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994 ರ ನಿಯಮ 3 ರಂತೆ ಅಪರಾಧವಾಗಿದ್ದು, ಈ ಸಂಬಂಧ ಕಲಂ 21 ರಂತೆ ಐದು ವರ್ಷಗಳವರೆಗೆ ವಿಸ್ತರಿಸಬಹುದಾದ ಸೆರೆಮನೆ ವಾಸ ಹಾಗೂ ಪ್ರತಿ ಹೆಕ್ಟೇರ್ ಪ್ರದೇಶಕ್ಕೆ ₹05.00 ಲಕ್ಷಗಳವರೆಗೆ ದಂಡ ವಿಧಿಸಲು ಅವಕಾಶವಿರುತ್ತದೆ ಹಾಗೂ ನಿಯಮ 44(1) ರಂತೆ ಎರಡು ವರ್ಷಗಳವರೆಗೆ ವಿಸ್ತರಿಸಬಹುದಾದ ಸೆರೆಮನೆ ವಾಸ ಹಾಗೂ ಪ್ರತಿ ಹೆಕ್ಟೇರ್ ಪ್ರದೇಶಕ್ಕೆ ₹05.00 ಲಕ್ಷಗಳವರೆಗೆ ದಂಡ ವಿಧಿಸಲು ಅವಕಾಶವಿರುತ್ತದೆ.
- ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994 ರ ನಿಯಮ 43-A ರಂತೆ ಅನಧಿಕೃತ ಗಣಿಗಾರಿಕೆ/ ಸಾಗಾಣಿಕೆ/ ದಾಸ್ತಾನಿನ ಸಂಬಂಧ ಮಾನ್ಯ ನ್ಯಾಯಾಲಯದಲ್ಲಿ ಮೊಕದ್ದಮೆಗಳನ್ನು ದಾಖಲಿಸಬೇಕಾಗಿರುತ್ತದೆ. ಅನಧಿಕೃತ ಗಣಿಗಾರಿಕೆ ನಡೆಸಿರುವ ವ್ಯಕ್ತಿಯು ಸದರಿ ಮೊಕದ್ದಮೆಯ ವಿಚಾರಣೆ ಕೈಗೊಳ್ಳುವ ಅಥವಾ ವಿಚಾರಣೆ ನಡೆಯುತ್ತಿರುವಾಗ ರಾಜಿ ಸಂಧಾನಕ್ಕೆ ಒಪ್ಪಿದಲ್ಲಿ, ಸಕ್ಷಮ ಪ್ರಾಧಿಕಾರಿಯು ಪ್ರಕರಣವನ್ನು ರಾಜಿಸಂಧಾನದ ಮೂಲಕ ಇತ್ಯರ್ಥಪಡಿಸಬಹುದಾಗಿದೆ.
- ಅಂತಹ ಇತ್ಯರ್ಥಪಡಿಸುವ ಪ್ರಕರಣಗಳಲ್ಲಿ ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994 ರ ಷೆಡ್ಯೂಲ್ I-C ರಂತೆ ನಿಗದಿಪಡಿಸಿರುವ ಕಾಂಪೌಂಡಿಂಗ್ ಶುಲ್ಕ ಮತ್ತು ರಾಜಧನವನ್ನು ಸಂಗ್ರಹಿಸಲು ಅವಕಾಶವಿರುತ್ತದೆ.

ಈ) ಅಕ್ರಮ ಗಣಿಗಾರಿಕೆಯಿಂದಾದ ಆರ್ಥಿಕ ನಷ್ಟವನ್ನು ತಡೆಯಲು ಸರ್ಕಾರವು ಏನಾದರೂ ಪರಿಹಾರಗಳನ್ನು ಹೊಂದಿದೆಯೇ; ಸದರಿ ಆರ್ಥಿಕ ನಷ್ಟಕ್ಕೆ ಯಾರು ಹೊಣೆಗಾರರು ಅಕ್ರಮ ಗಣಿಗಾರಿಕೆಯನ್ನು ತಡೆಗಟ್ಟಲು ಕಾನೂನುಗಳನ್ನು ಎಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗಿದೆ; ಈ ಕಾನೂನುಗಳ -

ರಾಜ್ಯದಲ್ಲಿ ಅನಧಿಕೃತ ಗಣಿ ಚಟುವಟಿಕೆಗಳನ್ನು ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ.

- ಕಳೆದ ಮೂರು ವರ್ಷಗಳಲ್ಲಿ ಅಕ್ರಮ ಕಲ್ಲು ಗಣಿಗಾರಿಕೆ ಸಂಬಂಧ ಪ್ರಕರಣಗಳನ್ನು ಪತ್ತೆ ಹಚ್ಚಿದ್ದು, ಸದರಿಯವರ ವಿರುದ್ಧ ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957 ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994ರ ನಿಯಮಗಳಂತೆ ಮೊಕದ್ದಮೆಗಳನ್ನು ದಾಖಲಿಸಿ, ದಂಡವನ್ನು ವಿಧಿಸಿ ಸಂಗ್ರಹಿಸಲಾಗಿದ್ದು, ವಿವರಗಳು ಈ ಕೆಳಕಂಡಂತಿದೆ:

| ಕ್ರ. ಸಂ. | ವರ್ಷ | ಪತ್ತೆ ಹಚ್ಚಿದ ಪ್ರಕರಣಗಳ ಸಂಖ್ಯೆ | ವಿಧಿಸಿದ ದಂಡ (₹ ಲಕ್ಷಗಳಲ್ಲಿ) | ದಾಖಲಿಸಿರುವ ಮೊಕದ್ದಮೆಗಳು |
|---|---|---|---|---|
| 1 | 2021-22 | 476 | 668.87 | 162 |
| 2 | 2022-23 | 607 | 729.00 | 192 |
| 3 | 2023-24 | 768 | 856.38 | 180 |
| ಒಟ್ಟು | | 1851 | 2254.25 | 534 |

- ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಐ 21 ಎಂಎಂಎನ್ (2) 2014, ದಿನಾಂಕ: 21.01.2014 ರಂತೆ ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957ರ ಕಲಂ 21 ಮತ್ತು 22ರಡಿ ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994ರ ನಿಯಮ 43 ಮತ್ತು 46 ರಂತೆ ಅನಧಿಕೃತ ಗಣಿಗಾರಿಕೆ, ಸಾಗಾಣಿಕೆ-

. . . 7

| | | |
|---|---|---|
| | -ಪರಿಣಾಮ ಕಾರಿತ್ವವನ್ನು ಸರಿಯಾಗಿ ಮೌಲ್ಯಮಾಪನ ಮಾಡಲಾಗು ತ್ತಿದೆಯೇ? (ಸಂಪೂರ್ಣ ಮಾಹಿತಿ ನೀಡುವುದು) | -ಮತ್ತು ದಾಸ್ತಾನು ವಿರುದ್ಧ ಕ್ರಮವಹಿಸಲು, ಕಂದಾಯ, ಅರಣ್ಯ ಪೊಲೀಸ್ ಹಾಗೂ ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳಿಗೆ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದ್ದು, ಅನಧಿಕೃತ ಕಲ್ಲು ಗಣಿಗಾರಿಕೆ / ಸಾಗಾಣಿಕೆಯನ್ನು ನಿಯಂತ್ರಿಸಲು ಜಿಲ್ಲಾ ಟಾಸ್ಕ್ ಪೋರ್ಸ್ (ಗಣಿ) ಸಮಿತಿಯಿಂದ ರಾಜ್ಯದಲ್ಲಿ ಆಯಕಟ್ಟಿನ ಪ್ರದೇಶಗಳಲ್ಲಿ ತನಿಖಾ ಠಾಣೆಗಳನ್ನು ತೆರೆದು ಕಾರ್ಯ ನಿರ್ವಹಿಸುತ್ತಿದ್ದು, ಅನಧಿಕೃತ ಕಲ್ಲು ಗಣಿಗಾರಿಕೆ/ ಸಾಗಾಣಿಕೆಯನ್ನು ನಿಯಂತ್ರಿಸಲಾಗುತ್ತಿದೆ.<br>• ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ ರಾಜ್ಯದಲ್ಲಿ ಮಂಜೂರು ಮಾಡಿರುವ ಕಲ್ಲು ಗಣಿಗುತ್ತಿಗೆ ಪ್ರದೇಶಗಳಲ್ಲಿ ಹಾಗೂ ಕಲ್ಲು ಗಣಿಗುತ್ತಿಗೆ ಪ್ರದೇಶವನ್ನು ಒತ್ತುವರಿ ಮಾಡಿ ನಿಯಮ ಉಲ್ಲಂಘಿಸಿ ಸಂಚಿತ ಆಡಿಟ್ ಪ್ರಮಾಣಕ್ಕಿಂತ ಅಧಿಕವಾಗಿ ಉಪಖನಿಜವನ್ನು ಉತ್ಪಾದಿಸಿ, ಸಾಗಾಣಿಕೆ ಮಾಡಿರುವುದನ್ನು ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರ (KSRSAC) ರವರಿಂದ ಕಲ್ಲುಗಣಿ ಗುತ್ತಿಗೆ ಪ್ರದೇಶಗಳ ಡ್ರೋಣ್/ ಡಿ.ಜಿ.ಪಿ.ಎಸ್ ಸರ್ವೆ ಕೈಗೊಳ್ಳಲಾಗುತ್ತಿದ್ದು, ಗುತ್ತಿಗೆ ಪ್ರದೇಶದ ಪ್ರಸ್ತುತ ಭೂಮಟ್ಟದ ಅಳತೆಗಳನ್ನು ಘನೀಕರಿಸಲಾಗುತ್ತಿದೆ. ಇದರಿಂದ ಮೂಲ ಖನಿಜ ಉತ್ಪಾದನಾ ಸ್ಥಳದಲ್ಲಿ ರಾಜಧನ ಸೋರಿಕೆ ತಡೆಗಟ್ಟಲು ಕ್ರಮ ವಹಿಲಾಗುತ್ತಿದೆ. ಈಗಾಗಲೇ 10 ಜಿಲ್ಲೆಗಳಲ್ಲಿ ಸಮೀಕ್ಷೆ ಕಾರ್ಯ ಮುಕ್ತಾಯಗೊಳಿಸಿದ್ದು, ವರದಿ ನಿರೀಕ್ಷೆಯಲ್ಲಿದೆ. ಇನ್ನುಳಿದ ಜಿಲ್ಲೆಗಳಲ್ಲಿ ಸಮೀಕ್ಷೆ ಕಾರ್ಯ ಪ್ರಗತಿಯಲ್ಲಿರುತ್ತದೆ.<br>• ಮಂಜೂರಾದ ಗಣಿ / ಕಲ್ಲುಗಣಿ ಗುತ್ತಿಗೆ ಪ್ರದೇಶಗಳನ್ನು ಹೊರತುಪಡಿಸಿ, ಗುತ್ತಿಗೆ ಪ್ರದೇಶದ ಹೊರಭಾಗದಲ್ಲಿ ಒತ್ತುವರಿ ಮಾಡಿ ಗಣಿಗಾರಿಕೆ ನಡೆಸುವುದನ್ನು ತಡೆಗಟ್ಟಲು Geo-fencing ಅಳವಡಿಸಿ ನಿರ್ವಹಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br>• ಅನಧಿಕೃತ ಖನಿಜ ಸಾಗಾಣಿಕೆಯನ್ನು ತಡೆಗಟ್ಟಲು One State One GPS ವ್ಯವಸ್ಥೆಯನ್ನು ಜಾರಿಗೆ ತಂದಿದ್ದು, ಖನಿಜ ಸಾಗಾಣಿಕಾ ವಾಹನಗಳು GPS ಅಳವಡಿಸಿಕೊಂಡು ಖನಿಜ ಸಾಗಾಣಿಕೆ ಪರವಾನಗಿಯೊಂದಿಗೆ ಸಾಗಾಣಿಕೆ ಮಾಡುವುದನ್ನು ಕಡ್ಡಾಯಗೊಳಿಸಿದೆ.<br>• ಅನಧಿಕೃತ ಗಣಿಗಾರಿಕೆಯನ್ನು ತಡೆಗಟ್ಟಲು ಖನಿಜ ರಕ್ಷಣಾ ಪಡೆ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗಿದೆ.<br>• ಮುಂದುವರೆದು, ಮೇಲಿನ ಎಲ್ಲಾ ಕ್ರಮಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ನೂತನ ILMS ತಂತ್ರಾಂಶವನ್ನು ಅಭಿವೃದ್ಧಿಪಡಿಸುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. |

ಸಂಖ್ಯೆ ಸಿಐ-ಎಂಎಂಎನ್/154/2024

**(ಎಸ್.ಎಸ್.ಮಲ್ಲಿಕಾರ್ಜುನ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.